ಆ) ಇದರಲ್ಲಿ ಗುಲ್ಬರ್ಗಾ ನಗರಕ್ಕೆ ಎಷ್ಟು ಹಣವನ್ನು ನಿಗದಿಪಡಿಸಲಾಗಿದೆ, (ವಿವರ ನೀಡುವುದು) ?

ಶ್ರೀ ರಾಮಚಂದ್ರ ಗೌಡ (ಯೋಜನಾ ಸಚಿವರು)

ಅ) ಗುಲ್ಬರ್ಗಾ ಜಿಲ್ಲೆಯಲ್ಲಿ ವಿಶೇಷ ಆರ್ಥಿಕ ವಲಯ ಸ್ಥಾಪಿಸಲು ಹಣವನ್ನು ನಿಗದಿಪಡಿಸಿರುವುದಿಲ್ಲ

ಆ) ಉದ್ಭವಿಸುವುದಿಲ್ಲ

742 (383) ಶ್ರೀ ಧ್ರುವನಾರಾಯಣ ಆರ್ (ಸಂತೇಮರಳ್ಳಿ) ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರುಗಳ ಹುದ್ದೆ ಎಷ್ಟು ,

ಆ) ಇವುಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ?

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು)

ಅ) 1094

ಆ) ಆರ್ಥಿಕ ಮಿತವ್ಯಯ ಆದೇಶ ಜಾರಿಯಲ್ಲಿರುವುದರಿಂದ ನೇರನೇಮಕಾತಿ ಮೂಲಕ ಭರ್ತಿ ಮಾಡಲು ಅವಕಾಶವಿಲ್ಲದಿರುವುದರಿಂದ ಅನುಕಂಪದ ಆಧಾರದ ಮೇಲೆ ಮಾತ್ರ ಹುದ್ದೆಗಳನ್ನು ತುಂಬಲಾಗುತ್ತಿದೆ

743 (384) ಶ್ರೀ ಧ್ರುವನಾರಾಯಣ ಆರ್ (ಸಂತೇಮರಳ್ಳಿ) ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸಂತೇಮರಳ್ಳಿ ವಿದಾನಸಭಾ ಕ್ಷೇತ್ರದಲ್ಲಿರುವ ನಾಡಕಛೇರಿಗಳು ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆಯೇ ,

ಆ) ಹಾಗಿದ್ದಲ್ಲಿ, ಸ್ವಂತ ಕಟ್ಟಡ ಒದಗಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ?

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು)

ಅ) ಸಂತೇಮರಳ್ಳಿ ವಿದಾನಸಭಾ ಕ್ಷೇತ್ರದಲ್ಲಿರುವ ನಾಡ ಕಛೇರಿಯು ತಾಲ್ಲೂಕು ಪಂಚಾಯ್ತಿ ಕಟ್ಟಡದಲ್ಲಿ ಸದ್ಯ ಕಾರ್ಯ ನಿರ್ವಹಿಸುತ್ತಿದೆ

ಆ) ಸಂತೇಮರಳ್ಳಿ ನಾಡ ಕಛೇರಿ ಕಟ್ಟಡಕ್ಕಾಗಿ ಸರ್ಕಾರಿ ನಿವೇಶನ ಲಭ್ಯವಿರುತ್ತದೆಂದು ಜಿಲ್ಲಾಧಿಕಾರಿಗಳಿಂದ ಪ್ರಸ್ತಾವನೆ ಸ್ವೀಕರಿಸಿದ್ದು, ಅನುದಾನದ ಲಭ್ಯತೆಯನ್ನು ಆಧರಿಸಿ ನಾಡ ಕಛೇರಿ ಕಟ್ಟಡವನ್ನು ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದು

744 (385) ಶ್ರೀ ಧ್ರುವ ನಾರಾಯಣ ಆರ್ (ಸಂತೇಮರಳ್ಳಿ) ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಚಾಮರಾಜನಗರ ಜಿಲ್ಲೆ ರಾಜ್ಯದಲ್ಲಿಯೇ ಅತಿ ಹಿಂದುಳಿದ ಜಿಲ್ಲೆಯಾಗಿರುವುದರಿಂದ ಈ ಜಿಲ್ಲೆಯಲ್ಲಿ ಭಾರಿ ಮತ್ತು ಮಧ್ಯಮ ಕೈಗಾರಿಕೆಯನ್ನು ಅಭಿವೃದ್ಧಿಪಡಿಸಲು ಸರ್ಕಾರ ಯೋಜನೆ ರೂಪಿಸಿದೆಯೇ ,

ಆ) ಈ ಭಾಗದಲ್ಲಿ ಹೆಚ್ಚು ನಿರುದ್ಯೋಗಿಗಳಿರುವುದರಿಂದ ಇಂತಹ ಕೈಗಾರಿಕೆಗಳನ್ನು ಇಲ್ಲಿ ಪ್ರಾರಂಭಿಸಿದರೆ ಅನುಕೂಲವಾಗುವುದಿಲ್ಲವೇ ,

ಇ) ಪ್ರತಿ ಜಿಲ್ಲೆಯಲ್ಲಿಯೂ ಕೈಗಾರಿಕೆಗಳನ್ನು ಸ್ಥಾಪಿಸಿ ಸ್ಥಳೀಯರಿಗೆ ಉದ್ಯೋಗವನ್ನು ದೊರಕಿಸುತ್ತಿರುವ ತಮಿಳುನಾಡು ರಾಜ್ಯದ ರೀತಿಯಲ್ಲಿ ರಾಜ್ಯದಲ್ಲೂ ದೊರಕಿಸಲು ಈವರೆವಿಗೆ ಕ್ರಮ ಕೈಗೊಳ್ಳದಿರಲು ಕಾರಣವೇನು ,

ಈ) ಹಾಗಿದ್ದಲ್ಲಿ, ಈ ದಿಸೆಯಲ್ಲಿ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ?

ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವರು)

ಅ) 1 ಸರ್ಕಾರವು 2006–11ರ ಅವಧಿಗೆ ನೂತನ ಕೈಗಾರಿಕಾ ನೀತಿಯನ್ನು ಘೋಷಿಸಿದ್ದು ಜಿಲ್ಲೆಗೆ ಕೈಗಾರಿಕೆಗಳನ್ನು ಆಕರ್ಷಿಸುವ ದೃಷ್ಟಿಯಿಂದ ಚಾಮರಾಜನಗರ ಜಿಲ್ಲೆಯ ಎಲ್ಲಾ ತಾಲ್ಲೂಕುಗಳನ್ನು ಅತಿ ಹೆಚ್ಚು ಹಿಂದುಳಿದ ತಾಲ್ಲೂಕುಗಳು, ಹೆಚ್ಚು ಹಿಂದುಳಿದ ತಾಲ್ಲೂಕುಗಳು ಹಾಗೂ ಹಿಂದುಳಿದ ತಾಲ್ಲೂಕುಗಳು ಎಂದು ಘೋಷಿಸಿದ್ದು ಇಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಿದರೆ ಅಂತಹ ಕೈಗಾರಿಕೆಗಳಿಗೆ ಕೈಗಾರಿಕಾ ಭೂಮಿ / ನಿವೇಶನದ ನೋಂದಣಿಗೆ ಮುದ್ರಾಂಕ ಶುಲ್ಕ ವಿನಾಯಿತಿ ಮತ್ತು ನೋಂದಣಿಯಲ್ಲಿ ಕಡಿತ, ಕೈಗಾರಿಕಾ ಬಳಕೆಗಾಗಿ ಪರಿವರ್ತನೆಯಾಗುವ ಭೂಮಿಯ ಮೇಲೆ ಪರಿವರ್ತನಾ ಶುಲ್ಕ ಮನ್ನಾ, ಪ್ರವೇಶ ತೆರಿಗೆ ಮತ್ತು ವಿಶೇಷ ಪ್ರವೇಶ ತೆರಿಗೆಯಲ್ಲಿ ವಿನಾಯಿತಿ ಹಾಗೂ ತ್ಯಾಜ್ಯ ವಸ್ತುಗಳ ಸಂಸ್ಕರಣಾ ಸ್ಥಾವರಗಳ ಸ್ಥಾಪನೆಗೆ ಸಹಾಯಧನ ನೀಡಲಾಗುವುದು

2 ಕೈಗಾರಿಕಾ ನೀತಿಯಲ್ಲಿ ಘೋಷಿಸಿರುವ ರಿಯಾಯಿತಿಗಳಿಂದ ಜಿಲ್ಲೆಯಲ್ಲಿ ಅವಕಾಶವಿರುವ ಪ್ರವಾಸೋದ್ಯಮ, ಗ್ರಾನೈಟ್ ಕಟಿಂಗ್ ಮತ್ತು ಪಾಲಿಶಿಂಗ್ ಆಹಾರ ಸಂಸ್ಕರಣೆ ವಲಯಗಳಲ್ಲಿ ಕೈಗಾರಿಕೆಗಳನ್ನು ಆಕರ್ಷಿಸಲು ಉತ್ತಮ ವಾತಾವರಣವನ್ನು ಸೃಷ್ಟಿಸಲಾಗಿದೆ

3 ಭಾರಿ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳು ಜಿಲ್ಲೆಯಲ್ಲಿ ಸ್ಥಾಪನೆ ಮಾಡಲು ಮುಂದೆ ಬಂದಲ್ಲಿ ಈ ಕೈಗಾರಿಕೆಗಳಿಗೆ ಅಗತ್ಯವಿರುವ ಜಮೀನು ಏಕ ಘಟಕ ಸಂಕೀರ್ಣ ಎಂದು ಭೂ ಸ್ವಾಧೀನ ಪಡಿಸಿಕೊಳ್ಳುವಾಗ ಶೇ 10 ರಷ್ಟು ಸೇವಾ ಶುಲ್ಕ ವಿಧಿಸಲಾಗುತ್ತದೆ

4 ಕೆ ಐ ಎ ಡಿ ಬಿ ಯವರು 4 ಏಕ ಘಟಕ ಸಂಕೀರ್ಣಗಳಿಗೆ 155 ಎಕರೆ ಜಮೀನು ಸ್ವಾಧೀನ ಪಡಿಸಿ ನೀಡಿರುತ್ತದೆ

ಆ) ಹೌದು

ಇ) ಕೈಗಾರಿಕಾ ನೀತಿಯಲ್ಲಿ ಘೋಷಿಸಿರುವ ರಿಯಾಯಿತಿ ಮತ್ತು ಸೌಲಭ್ಯಗಳನ್ನು ಪಡೆದು ಭಾರಿ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳು ಸ್ಥಾಪನೆಯಾಗುವುದರಿಂದ ಸ್ಥಳೀಯರಿಗೆ ಉದ್ಯೋಗಾವಕಾಶ ಸಿಗುತ್ತದೆ ಈ ದಿಸೆಯಲ್ಲಿ ಕೈಗಾರಿಕಾ ನೀತಿಯಂತೆ ಸ್ಥಳೀಯರಿಗೆ ಶೇ 80 ರಷ್ಟು ಉದ್ಯೋಗಾವಕಾಶ ಸಿಗುವ ಅವಕಾಶವಿದೆ

ಈ) ಭಾರಿ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳ ಪ್ರಸ್ತಾವನೆ ಅನುಮೋದಿಸುವ ಸಂದರ್ಭದಲ್ಲಿ ಸ್ಥಳೀಯರಿಗೆ 2006–11ರ ಕೈಗಾರಿಕಾ ನೀತಿಯಂತೆ ಉದ್ಯೋಗಾವಕಾಶ ಕಲ್ಪಿಸಬೇಕು ಎಂಬ ಷರತ್ತನ್ನು ಸರ್ಕಾರಿ ಆದೇಶದಲ್ಲಿ ಅಳವಡಿಸಲಾಗುತ್ತಿದೆ

745 (386) ಶ್ರೀ ಧ್ರುವನಾರಾಯಣ ಆರ್ (ಸಂತೇಮರಳ್ಳಿ) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಸಣ್ಣ ನೀರಾವರಿ ಕೆರೆಗಳ ಸಂಖ್ಯೆ ಎಷ್ಟು , (ಜಿಲ್ಲಾವಾರು ಮಾಹಿತಿ ನೀಡುವುದು) ,

ಆ) 2005–06, 2006–07ನೇ ಸಾಲಿನಲ್ಲಿ ಕೆರೆಗಳ ಅಭಿವೃದ್ಧಿಗೆ ಸರ್ಕಾರ ನೀಡಿರುವ ಅನುದಾನವೆಷ್ಟು ,

ಇ) ಈವರೆವಿಗೂ ಈ ಕೆರೆಗಳ ದುರಸ್ಥಿಗಾಗಿ ಮಂಜೂರಾಗಿರುವ ಬಾಬ್ತು ಪಾವತಿಯಾಗದೆ ಬಾಕಿ ಉಳಿದಿರುವ ಹಣವೆಷ್ಟು ,

ಈ) ಸರ್ಕಾರ ಈ ಬಾಕಿ ಉಳಿದಿರುವ ಹಣಕ್ಕೆ ತೆಗೆದುಕೊಂಡಿರುವ ಕ್ರಮವೇನು ,

ಉ) ಸಂತೇಮರಳ್ಳಿ ವಿಧಾನಸಭಾ ಕ್ಷೇತ್ರಕ್ಕೆ ಸೇರಿದ ಕೆರೆಗಳ ಅಭಿವೃದ್ಧಿಗೆ 2005–06, 2006–07ನೇ ಸಾಲಿನಲ್ಲಿ ಬಿಡುಗಡೆಯಾದ ಹಣವೆಷ್ಟು ?

ಶ್ರೀ ಬಿ ಎಸ್ ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು ಹಾಗೂ ಸಣ್ಣ ನೀರಾವರಿ ಸಚಿವರು)

ಅ) ಅನುಬಂಧದಲ್ಲಿ ನೀಡಲಾಗಿದೆ

ಆ) 2005–06ನೇ ಸಾಲಿನಲ್ಲಿ 12807 30 ಲಕ್ಷ ರೂ ಗಳು, 2006–07ನೇ ಸಾಲಿನಲ್ಲಿ 41985 44 ಲಕ್ಷ ರೂ ಗಳನ್ನು ಒದಗಿಸಲಾಗಿದೆ

ಇ) ಪ್ರಸಕ್ತ ಸಾಲಿನಲ್ಲಿ ಮಂಜೂರಾಗಿರುವ ಮೊತ್ತ 41985 44 ಲಕ್ಷ ರೂ ಗಳು ಉಳಿದಿರುವ ಮೊತ್ತ 36157 52 ಲಕ್ಷ ರೂ ಗಳು

22639 00 ಲಕ್ಷ ರೂ ಗಳನ್ನು ಅಧ್ಯರ್ಪಣೆ ಮಾಡಲು ಪ್ರಸ್ತಾಪಿಸಿದ್ದು, ಉಳಿಯುವ ಮೊತ್ತವನ್ನು 2007ರ ಅಂತ್ಯದವರೆಗೆ ವೆಚ್ಚ ಮಾಡಲು ಯೋಜಿಸಲಾಗಿದೆ

Pl
ಇ